**ಸಾಕ್ಷಿಯನ್ನು ದಿಃ 26.06.2024 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ದೂರುದಾರರ ಪರ ಶ್ರೀ ಡಿ ಕೆ ಪಿ ವಕೀಲರಿಂದಃ**

ನಾನು ಕೆಲವೊಂದು ದಾಖಲೆಗಳನ್ನು ಹಾಜರು ಪಡಿಸಿದ್ದು, ಅವುಗಳನ್ನು ನೋಡಿದರೆ ಗುರುತಿಸುತ್ತೇನೆ.

(1) ಆರೋಪಿಯು ನೀಡಿದ ಚೆಕ್ ಅನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ನಿಪಿ-1 ರ ಮೇಲೆ ಇರುವ ಆರೋಪಿಯ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 1(ಎ) ಎಂದು ಗುರುತಿಸಲಾಯಿತು.

(2) ಬ್ಯಾಂಕ್‌ನವರು ನೀಡಿದ ಹಿಂಬರಹವನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 2 ಎಂದು ಗುರುತಿಸಲಾಯಿತು.

(3) ವಕೀಲರ ಮುಖಾಂತರ ಆರೋಪಿಗೆ ಕಳುಹಿಸಿದ ನೋಟೀಸಿನ ಕಛೇರಿ ಪ್ರತಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿ ಪಿ 3 ಎಂದು ಗುರುತಿಸಲಾಯಿತು.

(4) ವಕೀಲರ ಮುಖಾಂತರ ಆರೋಪಿಗೆ ನೋಟೀಸ್ ಕಳುಹಿಸಿದ ಬಗ್ಗೆ ಅಂಚೆ ರಶೀದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅವುಗಳನ್ನು ನಿ ಪಿ 4 ಎಂದು ಗುರುತಿಸಲಾಯಿತು.

(5) ತಿರಸ್ಕೃತಗೊಂಡ ಮತ್ತು ಜಾರಿಯಾಗದೇ ಹಿಂದಿರುಗಿದ ಅಂಚೆ ಲಕೋಟೆಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ.5 ಎಂದು ಅದರಲ್ಲಿರುವ ನೋಟಿಸನ್ನು ನಿಪಿ-5 ಎ ಗುರುತಿಸಲಾಯಿತು.

**ಆರೋಪಿಯ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ವಿನಂತಿಸಿಕೊಳ್ಳುತ್ತೇನೆ.**

**ಪಾಟೀ ಸವಾಲುಃ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದು ಮುಂದುಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)

**ಓ ಹೇ ಕೇ ಸರಿ ಇದೆ.**

**(ಅಜಿತ್ ದೇವರಮನಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,**
**ಮದ್ದೂರು**